## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 137 (199) |
| ಸದಸ್ಯರ ಹೆಸರು | : | ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.09.2021 |
| ಉತ್ತರಿಸುವವರು | : | ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಕಾಡಾನೆ, ಹುಲಿ ಸೇರಿದಂತೆ ವನ್ಯಜೀವಿಗಳ ಉಪಟಳ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಇದರ ನಿಯಂತ್ರಣಕ್ಕೆ ಕಳೆದ 3 ವರ್ಷಗಳಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರಗಳನ್ನು ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ಮಾನವ-ಆನೆ ಸಂಘರ್ಷ ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ವಹಿಸಲಾಗುತ್ತಿದೆ.<br>1. ಆನೆ ತಡೆ ಕಂದಕ ನಿರ್ವಹಣೆ<br>2. ಸೋಲಾರ್ ತಂತಿ ಬೇಲಿ ನಿರ್ಮಾಣ/ನಿರ್ವಹಣೆ<br>3. ತೂಗು ಸೋಲಾರ್ ತಂತಿ ಬೇಲಿ ನಿರ್ಮಾಣ/ನಿರ್ವಹಣೆ<br>4. ಉಪಯೋಗಿತ ರೈಲು ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಾಣ<br>5. ವನ್ಯಪ್ರಾಣಿಗಳಿಗೆ ಕುಡಿಯುವ ನೀರಿಗಾಗಿ ಕೆರೆ/ಚೆಕ್‌ಡ್ಯಾಂಗಳ ನಿರ್ಮಾಣ ಮತ್ತು ಹಾಲಿ ಇರುವ ಕೆರೆಗಳ ಹೂಳೆತ್ತುವ ಕಾಮಗಾರಿಗಳನ್ನು ನಿರ್ವಹಿಸಲಾಗುತ್ತಿದೆ.<br>6. ಕೊಡಗು ಜಿಲ್ಲೆಯ ಅರಣ್ಯ ವೃತ್ತದ ವ್ಯಾಪ್ತಿಯ ವಲಯಗಳಲ್ಲಿ ಕಾಡಾನೆ ಹಾವಳಿಯನ್ನು ತುರ್ತು ನಿರ್ವಹಣೆ ಕ್ಷಿಪ್ರ ಸ್ಪಂದನ ತಂಡಗಳನ್ನು ರಚಿಸಿ ಕಾರ್ಯನಿರ್ವಹಿಸಲಾಗುತ್ತಿದೆ.<br>7. ಆಯ್ದ ವಲಯಗಳಲ್ಲಿ ಕಾಡಾನೆಗಳನ್ನು ಮರಳಿ ಕಾಡಿಗೆ ಓಡಿಸುವ ತಂಡ ರಚನೆ ಮಾಡಲಾಗಿರುತ್ತದೆ.<br>8. ಕಾಡಾನೆ ಇರುವಿಕೆ ಅವುಗಳ ಚಲನವಲನಗಳ ಬಗ್ಗೆ ಸಾರ್ವಜನಿಕರಿಗೆ ರೈತರಿಗೆ ಮಾಹಿತಿ ನೀಡುವ SMS Alert System ಕಾರ್ಯ ನಿರ್ವಹಿಸುತ್ತಿದೆ.<br>9. ವನ್ಯಪ್ರಾಣಿಗಳ ದಾಳಿಯಿಂದ ಬಾಧಿತ ಗ್ರಾಮಗಳ ಜನರೊಂದಿಗೆ ಸಂಪರ್ಕ ಸಭೆಯನ್ನು ನಡೆಸಲಾಗುತ್ತಿದೆ. |

.....2

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | 10. ಕೊಡಗು ಜಿಲ್ಲೆಯಲ್ಲಿ 2014 ರಿಂದ ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ 11 ಕಾಡಾನೆಗಳನ್ನು ಸೆರೆಹಿಡಿದು ಸ್ಥಳಾಂತರ ಮಾಡಲಾಗಿರುತ್ತದೆ.<br>11. ವಿರಾಜಪೇಟೆ ವಿಭಾಗದಲ್ಲಿ 9 ಆನೆಗಳಿಗೆ ರೇಡಿಯೋ ಕಾಲರ್‌ಗಳನ್ನು ಅಳವಡಿಸಿ ಅವುಗಳ ಚಲನ ವಲನಗಳ ಬಗ್ಗೆ ನಿಗಾವಹಿಸಲಾಗುತ್ತಿದೆ.<br>12. ಕೊಡಗು ಜಿಲ್ಲೆಯ ನಾಗರಹೊಳೆ ವ್ಯಾಪ್ತಿಯಲ್ಲಿ ರಕ್ಷಣಾ ಕೆಲಸಗಳಿಗಾಗಿ ಎಸ್.ಟಿ.ಪಿ.ಎಫ್ ತಂಡ ನೇಮಕ ಮಾಡಿ ರಕ್ಷಣಾ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ.<br>13. ವನ್ಯಪ್ರಾಣಿಗಳ ರಕ್ಷಣಾ ದೃಷ್ಟಿಯಿಂದ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ 37 ವನ್ಯಪ್ರಾಣಿ ಹತ್ಯೆ ತಡೆ ಶಿಬಿರಗಳನ್ನು ಸ್ಥಾಪನೆ ಮಾಡಿ ಪ್ರತಿ ದಿನ ಗಸ್ತು ಮಾಡಿ ಯಾವುದೇ ಅಕ್ರಮ ಚಟುವಟಿಕೆಗಳು ನಡೆಯದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.<br>14. ಈ ರಕ್ಷಣಾ ಕಾರ್ಯದ ಸಿಬ್ಬಂದಿಗಳಿಗೆ ಹಾಗೂ ಇಲಾಖಾ ಸಿಬ್ಬಂದಿಗಳಿಗೆ ವೈರ್‌ಲೆಸ್ ವಾಕಿ ಟಾಕಿ, ಶಸ್ತ್ರಾಸ್ತ್ರ ಆಹಾರ ಸಾಮಗ್ರಿಗಳನ್ನು ಒದಗಿಸಿ ಪರಿಣಾಮಕಾರಿಯಾಗಿ ರಕ್ಷಣಾ ಕಾರ್ಯ ಕೈಗೊಳ್ಳಲಾಗುತ್ತಿದೆ.<br>15. ಮಾನವ-ಪ್ರಾಣಿ ಸಂಘರ್ಷವನ್ನು ತಡೆಯಲು ತಕ್ಷಣದ ಕ್ರಮಗಳನ್ನು ತೆಗೆದುಕೊಳ್ಳಲು "ಕೊಡಗು ಮಾನವ-ವನ್ಯಪ್ರಾಣಿ ಸಂಘರ್ಷ ಉಪಶಮನ ಪ್ರತಿಷ್ಠಾನ" ವನ್ನು ವೃತ್ತ ಮಟ್ಟದಲ್ಲಿ ಸ್ಥಾಪಿಸಲಾಗಿದೆ. |
| ಇ) | ಯಾವ ರೀತಿಯ ವೈಜ್ಞಾನಿಕ ಹಾಗೂ ನಿರ್ದಿಷ್ಟವಾದ ಕ್ರಮಗಳನ್ನು ಸರ್ಕಾರ ಅಳವಡಿಸಿಕೊಳ್ಳುವ ಮೂಲಕ ವನ್ಯಜೀವಿ-ಮಾನವ ಸಂಘರ್ಷವನ್ನು ನಿಯಂತ್ರಿಸಲಾಗಿದೆ; (ವಿವರಗಳನ್ನು ನೀಡುವುದು) | ವನ್ಯಜೀವಿ -ಮಾನವ ಸಂಘರ್ಷ ತಪ್ಪಿಸಲು ವಿಭಾಗದ ಅಧೀನ ಕಛೇರಿಯಲ್ಲಿ ಆರ್.ಆರ್.ಟಿ. ಕ್ಯಾಂಪ್ ಕರ್ತವ್ಯ ನಿರ್ವಹಿಸುತ್ತಿದ್ದು, ವರ್ಷದ 365 ದಿನವು ನಿರಂತರವಾಗಿ ಹಗಲು-ರಾತ್ರಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕ್ಷಿಪ್ರ ಕಾರ್ಯಚರಣೆಗೆ ಸಿಬ್ಬಂದಿಗಳು, ಸಂಚಾರಿ ಕ್ಷಿಪ್ರ ಕಾರ್ಯಚರಣೆ ತಂಡಗಳಾಗಿದ್ದು, ಆಗಿಂದಾಗ್ಗೆ ಸಾರ್ವಜನಿಕರಿಂದ ಬರುವ ವನ್ಯಪ್ರಾಣಿಗಳಿರುವ ಬಗ್ಗೆ ದೂರವಾಣಿ ದೂರು ಬಂದ ತಕ್ಷಣ ಸದ್ರಿ ಸ್ಥಳಕ್ಕೆ ಭೇಟಿ ನೀಡಿ ಅಕ್ಕಪಕ್ಕದ ತೋಟದಲ್ಲಿರುವ ಕಾರ್ಮಿಕರಿಗೆ ಹಾಗೂ ಇತರೆ ಜನರಿಗೆ ಮಾಹಿತಿ ನೀಡಿ ಆನೆಗಳು, ಇತರೆ ವನ್ಯಪ್ರಾಣಿಗಳು ಇದ್ದರೆ ಕಾಡಿಗೆ ವಾಪಾಸ್ಸು ಹಿಮ್ಮೆಟ್ಟಿಸುವ ಬಗ್ಗೆ ಮೆಗಾ ಫೋನಿನಲ್ಲಿ ಸ್ಥಳೀಯ ವಾಟ್ಸ್‌ಅಪ್ ಗ್ರೂಪ್‌ನಲ್ಲಿ ಮಾಹಿತಿ ನೀಡಿ ಖಾಸಗಿ ಜಮೀನಲ್ಲಿರುವ ವನ್ಯಪ್ರಾಣಿಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಪ್ರಕ್ರಿಯೆ ನಡೆಯುತ್ತಿರುತ್ತದೆ. |

.....3

| | | |
|---|---|---|
| ಈ) | ವೈಜ್ಞಾನಿಕ ಹಾಗೂ ಸೂಕ್ತ ರೀತಿಯ ನಿಯಂತ್ರಣ ಕ್ರಮಗಳನ್ನು ತೆಗೆದುಕೊಂಡಿದ್ದಲ್ಲಿ, ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ವನ್ಯಜೀವಿ-ಮಾನವ ಸಂಘರ್ಷ ಪ್ರಕರಣಗಳು ಕಡಿಮೆಯಾಗಿವೆಯೇ? (ಸಂಪೂರ್ಣ ವಿವರ ನೀಡುವುದು) | ವನ್ಯಪ್ರಾಣಿಗಳು ಕಾಡಿನಲ್ಲಿ ಆಹಾರ ಮತ್ತು ನೀರನ್ನು ಅರಸಿ ಕಾಡಿನಿಂದ ನಾಡಿಗೆ ಬಂದು ಸಾರ್ವಜನಿಕರಿಗೆ / ಖಾಸಗಿ ಆಸ್ತಿಗಳಿಗೆ ಹಾನಿಯುಂಟು ಮಾಡುವ ಪ್ರಕರಣಗಳು ಮರುಕಳಿಸುತ್ತಿರುತ್ತದೆ. ಇದನ್ನು ವೈಜ್ಞಾನಿಕವಾಗಿ ವಿಶ್ಲೇಷಿಸಿದಾಗ ವರ್ಷದಿಂದ ವರ್ಷಕ್ಕೆ ವನ್ಯಪ್ರಾಣಿಗಳ ಸಂತತಿ ವೃದ್ಧಿಯಾಗುತ್ತಿರುತ್ತದೆ. ಅಲ್ಲದೇ ಅತಿಯಾದ ಸಂಚಾರ ದಟ್ಟಣೆ ಹಾಗೂ ರಸ್ತೆಯಲ್ಲಿನ ಚಲನ-ವಲನ, ಹೆಚ್ಚಿನ ಸಂಖ್ಯೆಯಲ್ಲಿ ತಲೆಯೆತ್ತುತ್ತಿರುವ ಪ್ರವಾಸಿ ಚಟುವಟಿಕೆಗಳು ಮತ್ತು ಆನೆ ವಲಯ ಪ್ರದೇಶಗಳಲ್ಲಿನ ಭೂ ಪ್ರದೇಶದ ಬಳಕೆಯಲ್ಲಿನ ಬದಲಾವಣೆಯಿಂದ ಮಾನವ-ವನ್ಯಜೀವಿ ಸಂಘರ್ಷ ಪ್ರಕರಣಗಳು ಕಡಿಮೆಯಾಗಿರುವುದಿಲ್ಲ. |

**ಸಂಖ್ಯೆ: ಅಪಜೀ 157 ಎಫ್ ಡಬ್ಲ್ಯೂ ಎಲ್ 2021**

(ಉಮೇಶ್ ವಿ.ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು